ಕರ್ನಾಟಕ ಸರ್ಕಾರ (ಸಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ **(**ಆರ್**.**ಪಿ**.**ಸಂಖ್ಯೆ **57)** ನಮೂನೆ ಸಂಖ್ಯೆ **4 (**ಸಿವಿಲ್**)** |

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ**.**ಎಂ**.**ಎಫ್**.**ಸಿ ನ್ಯಾಯಾಲಯ**,** ಹೊಸಕೋಟೆ
ಇವರ ನ್ಯಾಯಾಲಯದಲ್ಲಿ
ಸಿ**.**ಸಿ**.**ನಂಬರ್ **540-2016**

ಪಿ.ಡಬ್ಲು-1.
ಸಿ.ಡಬ್ಲು-1.

ದಿ: 09.04.2026 ರಂದು ಸತ್ಯ ಪ್ರತಿಜ್ಞೆ ಮೇಲೆ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು**:** ಆರೋಪಿ ಪರ ಶ್ರೀಯುತ ಎಂ**.**ಆರ್**.** ವಕೀಲರಿಂದ

ಆರೋಪಿಯು ನನಗೆ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿ ಜೀವ ಬೆದರಿಕೆ ಹಾಕಿರಲಿಲ್ಲ ಎಂದರೆ ಸರಿ. ನಾನು ಹಲ್ಲೆ ಗಾಯದ ಕುರಿತು ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿ. ನಿಪಿ.1 ಕ್ಕೆ ಪೊಲೀಸರು ಸಹಿ ಮಾಡುವಂತೆ ಸೂಚಿಸಿದ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ.1 ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ನನ್ನ ಸಮಕ್ಷಮ ಯಾವುದೇ ಹಲ್ಲೆ ಜಾಗದ ಮಹಜರ್ ನ್ನು ಜರುಗಿಸಿ ಯಾವುದೇ ವಸ್ತುವನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ ಎಂದರೆ ಸರಿ. ಮು.ಮಾ.೧ ನೀಲಗಿರಿ ದೊಣ್ಣೆಯನ್ನು ಪ್ರಥಮ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿ. ನಾನು ಮತ್ತು ಆರೋಪಿ ರಾಜಿ ಆಗಿರುತ್ತೇವೆ ಎಂದರೆ ಸರಿ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ**:-**ಇಲ್ಲ**-**
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)
ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಹೊಸಕೋಟೆ.